ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಾಮಾನ್ಯ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡಪ್ರಭ ದಿನಾಂಕ : DATE : 2/07/2019

# ಶ್ರೀಮಂತ್ ಪಾಟೀಲ್ ಇರುವ ಆಸ್ಪತ್ರೆಗೆ ಕಾಂಗ್ರೆಸ್ಸಿಗರ ಲಗ್ಗೆ

ಕ.ಪ್ರ 2/7/19

## ಪೊಲೀಸರ ತಡೆ: ವಾಗ್ವಾದ | 6 ತುಕಡಿ ಪೊಲೀಸ್ ನಿಯೋಜನೆ
## ಹೃದ್ರೋಗ ತಜ್ಞರೇ ಇಲ್ಲದ ಆಸ್ಪತ್ರೆಯಲ್ಲಿ ಶಾಸಕಗೆ ಹೃದಯ ಚಿಕಿತ್ಸೆ

ಬೆಂಗಳೂರು: ಮುಂಬೈನ ಸೇಂಟ್ ಜಾರ್ಜ್ ಸರ್ಕಾರಿ ಆಸ್ಪತ್ರೆಯಲ್ಲಿ ದಾಖಲಾಗಿರುವ ರಾಜ್ಯದ ಕಾಗವಾಡ ಶಾಸಕ ಶ್ರೀಮಂತ್ ಪಾಟೀಲ್ ಭೇಟಿಗೆ ಪ್ರಯತ್ನಿಸಿದ ಮಹಾರಾಷ್ಟ್ರದ ಕಾಂಗ್ರೆಸ್ ಶಾಸಕರು, ಮುಖಂಡರು ತಮ್ಮನ್ನು ತಡೆದ ಪೊಲೀಸರೊಂದಿಗೆ ತೀವ್ರ ವಾಗ್ವಾದ ನಡೆಸಿದರು. ಈ ಹಿನ್ನೆಲೆಯಲ್ಲಿ ಶನಿವಾರ ಆಸ್ಪತ್ರೆಗೆ ಪೊಲೀಸ್ ಭದ್ರತೆ ಹೆಚ್ಚಿಸಲಾಗಿದೆ. ಆಸ್ಪತ್ರೆಯ ಮುಂಭಾಗ ಹಾಗೂ ಆವರಣದಲ್ಲಿ ನೂರಾರು ಪೊಲೀಸರನ್ನು ಭದ್ರತೆಗೆ ನಿಯೋಜಿಸಲಾಗಿದೆ. ಮಹಾರಾಷ್ಟ್ರ ಸರ್ಕಾರ ಸುಮಾರು ಆರು ಪೊಲೀಸ್ ತುಕಡಿಗಳನ್ನು ನಿಯೋಜಿಸಿದೆ. ಯಾವುದೇ ಪಕ್ಷದ ನಾಯಕರು, ಮುಖಂಡರು ಆಸ್ಪತ್ರೆ ಒಳಗೆ ಹೋಗದಂತೆ ಎಚ್ಚರಿಕೆ ವಹಿಸಿದ್ದಾರೆ. ಅಲ್ಲದೆ, ಶಾಸಕ ಶ್ರೀಮಂತ್ ಪಾಟೀಲ್ ಅವರು ಚಿಕಿತ್ಸೆ ಪಡೆಯುತ್ತಿರುವ ಕೊಠಡಿಯ ಬಳಿಯೂ ಪೊಲೀಸರನ್ನು ನಿಯೋಜಿಸಲಾಗಿದೆ. ನಮ್ಮ ಪಕ್ಷದ ಶಾಸಕ ಶ್ರೀಮಂತ ಪಾಟೀಲ್‌ರಿಗೆ ಹೃದಯ ಕಾಯಿಲೆ ಎನ್ನುತ್ತಾರೆ. ಆದರೆ, ಅವರು ದಾಖಲಾಗಿರುವ ಆಸ್ಪತ್ರೆಯಲ್ಲಿ ಹೃದ್ರೋಗ ತಜ್ಞ ವೈದ್ಯರೇ ಇಲ್ಲ ಎಂದು ಕಿಡಿ ಕಾರಿದರು.



### ಸರ್ಕಾರ ಪತನ ಆಗೋವರೆಗೆ ಅತೃಪ್ತರು ಸಿಗಲ್ಲ

ಈ ಮಧ್ಯೆ, ಮೈತ್ರಿ ಸರ್ಕಾರದ ಅತೃಪ್ತ ಶಾಸಕರು ಅಜ್ಞಾತವಾಸ ಮುಂದುವರೆಸಿದ್ದಾರೆ. ಸೋಮವಾರ ರಾಜ್ಯ ವಿಧಾನಸಭೆಯಲ್ಲಿ ವಿಶ್ವಾಸಮತ ಯಾಚನೆ ಪ್ರಕ್ರಿಯೆ ಪೂರ್ಣಗೊಂಡು ಸರ್ಕಾರ ಪತನವಾಗುವವರೆಗೂ ಬಹಿರಂಗವಾಗಿ ಕಾಣಿಸಿಕೊಳ್ಳದಿರಲು ತೀರ್ಮಾನಿಸಿದ್ದಾರೆ. ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ 12 ದಿನಗಳ ಕಾಲ ಮುಂಬೈನ ರೆನೆಸಾನ್ಸ್ ಹೋಟೆಲ್‌ನಲ್ಲಿಯೇ ತಂಗಿದ್ದರು.

5